ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು

ಆರೋಗ್ಯ ಸೌಧ, ಮಹಡಿ, ಮಾಗಡಿ ರಸ್ತೆ, ಬೆಂಗಳೂರು–560023

**ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/24/2021–22** **ದಿನಾಂಕ:08.06.2021**

**ಇವರಿಗೆ,**

1. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.

**ಮಾನ್ಯರೆ,**

ವಿಷಯ: 18 ರಿಂದ 44 ವರ್ಷ ವಯೋಮಾನದವರಲ್ಲಿ ಆದ್ಯತೆ ಗುಂಪಿನ ಆರೋಗ್ಯ ಕಾರ್ಯಕರ್ತರ ಅವಲಂಬಿತ ಕುಟುಂಬದವರಿಗೆ ಕೋವಿಡ್–19 ಲಸಿಕೆ ನೀಡಲು ಮಾರ್ಗಸೂಚಿ.

ಉಲ್ಲೇಖ:
1. ಸನ್ಮಾನ್ಯ ಮುಖ್ಯ ಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಪತ್ರ ಸಂಖ್ಯೆ: ಮುಮಂ/ಗೃಕ/387/2021 ದಿನಾಂಕ 05.06.2021
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ನಿರ್ದೇಶನ
3. ಪತ್ರ ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/20/2021–22, ದಿನಾಂಕ 20.05.2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 18 ರಿಂದ 44 ವರ್ಷದ ಫಲಾನುಭವಿಗಳಿಗೆ ದಿನಾಂಕ 22.05.2021 ರಿಂದ ಆಯ್ದ ಗುಂಪುಗಳಿಗೆ ಕೋವಿಡ್–19 ಲಸಿಕಾಕರಣ ಪ್ರಾರಂಭಿಸುವ ಕುರಿತು ಉಲ್ಲೇಖ 3 ರ ಪತ್ರದಲ್ಲಿ ತಿಳಿಸಲಾಗಿತ್ತು. **ಸದರಿ ಪತ್ರಕ್ಕೆ ಆರೋಗ್ಯ ಕಾರ್ಯಕರ್ತರ ಅವಲಂಬಿತ ಕುಟುಂಬದವರನ್ನು** ರಾಜ್ಯ ಗುರುತಿಸಿರುವ ದುರ್ಬಲ ಗುಂಪಿನ ಫಲಾನುಭವಿಗಳು ಮತ್ತು ರಾಜ್ಯ ಕರೋನ ಮುಂಚೂಣಿ ಕಾರ್ಯಕರ್ತರು ಗುಂಪಿಗೆ ಈಗಾಗಲೇ ಸೇರ್ಪಡೆಗೊಳಿಸಿದ್ದು, ಈ ಕೆಳಕಂಡ ಮಾರ್ಗಸೂಚಿಯಂತೆ ಲಸಿಕಾಕರಣ ನಡೆಸಲು ತಿಳಿಸಿದೆ.

1. ಭಾರತ ಸರ್ಕಾರದ ಮಾರ್ಗಸೂಚಿಯಲ್ಲಿ ವ್ಯಾಖ್ಯಾನಿಸಿದಂತೆ ಆರೋಗ್ಯ ಕಾರ್ಯಕರ್ತರೆಂದರೆ **ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ಸೇವೆಗಳನ್ನು ಒದಗಿಸುವವರು ಮತ್ತು ಆರೋಗ್ಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇತರೆ ನೌಕರರು.**
2. ಈ ವ್ಯಾಖ್ಯಾನದನ್ವಯ ಆರೋಗ್ಯ ಕಾರ್ಯಕರ್ತರು ಲಸಿಕೆ ಪಡೆಯದಿದ್ದರೆ ಅವರಿಗೆ ಭಾರತ ಸರ್ಕಾರದಿಂದ ಲಸಿಕಾಕರಣಕ್ಕಾಗಿ ಸರಬರಾಜಾದ ಲಸಿಕೆಗಳನ್ನು ಬಳಸಿ ಲಸಿಕೆ ನೀಡುವುದು.
3. ಜನವರಿ 16, 2021 ರಿಂದ ಪ್ರಾರಂಭಿಸಲಾದ ಮೊದಲ ಹಂತದ **ಕೋವಿಡ್ ಲಸಿಕಾಕರಣದಲ್ಲಿ ಮೇಲೆ ವ್ಯಾಖ್ಯಾನಿಸಿದಂತೆ ಲಸಿಕೆ ಪಡೆದ ಆರೋಗ್ಯ ಕಾರ್ಯಕರ್ತರ ಕುಟುಂಬದವರನ್ನು ರಾಜ್ಯದ ಮೂರನೇ ಹಂತದ ಕೋವಿಡ್ ಲಸಿಕಾಕರಣದಲ್ಲಿ ಗುರುತಿಸಲಾದ ದುರ್ಬಲ ಗುಂಪಿನಡಿ/ಅತಿ ಅಪಾಯದಲ್ಲಿರುವ (Vulnerable group) ಕೋವಿಡ್ ಲಸಿಕಾಕರಣಕ್ಕೆ** ಸೇರ್ಪಡೆಗೊಳಿಸಲಾಗಿದೆ. (ಅನುಬಂಧ–1 **ನ್ನು ಪರಿಷ್ಕರಿಸಿ ಲಗತ್ತಿಸಿದೆ)**
4. ಆರೋಗ್ಯ ಕಾರ್ಯಕರ್ತರ ಕುಟುಂಬದವರೆಂದರೆ ಒಂದೇ ಸೂರಿನಡಿ ವಾಸಿಸುವ **ಗಂಡ/ಹೆಂಡತಿ, ಅತ್ತೆ, ಮಾವ, ತಂದೆ, ತಾಯಿ ಮತ್ತು 18 ರಿಂದ 44 ವರ್ಷದೊಳಗಿನ ಮಕ್ಕಳು.** ಇವರುಗಳಿಗೆ ಮಾತ್ರ ಕೋವಿಡ್ ಲಸಿಕಾಕರಣ ನಡೆಸುವುದು
5. ಆರೋಗ್ಯ ಕಾರ್ಯಕರ್ತರು ತಮ್ಮ ಕುಟುಂಬದವರೆಂದು ಪರಿಗಣಿಸಲು ನೀಡುವ ದಾಖಲೆಯನ್ನು ಆರೋಗ್ಯ ಕಾರ್ಯಕರ್ತರು ಕರ್ತವ್ಯ ನಿರ್ವಹಿಸುವ ಸಂಸ್ಥೆಯ ಮುಖ್ಯಸ್ಥರು ಪರಿಶೀಲಿಸಿ ಪ್ರಮಾಣೀಕರಿಸುವುದು.

6. ಸದರಿ ಗುಂಪಿನಲ್ಲಿರುವ 45 ವರ್ಷ ಮೇಲ್ಪಟ್ಟವರಿಗೆ ಭಾರತ ಸರ್ಕಾರದಿಂದ ಸರಬರಾಜಾದ ಲಸಿಕೆಗಳನ್ನು ಬಳಸಿ ಲಸಿಕಾಕರಣವನ್ನು ನಡೆಸುವುದು.
7. ಸದರಿ ಗುಂಪಿನಲ್ಲಿರುವ 18 ರಿಂದ 44 ವರ್ಷದೊಳಗಿನವರಿಗೆ ರಾಜ್ಯ ಸರ್ಕಾರದಿಂದ ಖರೀದಿಸಿದ ಲಸಿಕೆಗಳನ್ನು ಬಳಸಿ ಲಸಿಕಾಕರಣವನ್ನು ನಡೆಸುವುದು.

ಎಲ್ಲಾ ಹಂತದಲ್ಲಿ ಕೋವಿಡ್ ಲಸಿಕಾಕರಣದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸಲು ಕೋರಲಾಗಿದೆ.

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.
3. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
4. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ)

ಮಾಹಿತಿಗಾಗಿ:

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
5. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
8. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
11. ಕಛೇರಿ ಪ್ರತಿ.

## ಅನುಬಂಧ-1

**ರಾಜ್ಯ ಗುರುತಿಸಿರುವ ದುರ್ಬಲ ಗುಂಪಿನ ಫಲಾನುಭವಿಗಳು ಮತ್ತು ರಾಜ್ಯ ಕರೋನ ಮುಂಚೂಣಿ ಕಾರ್ಯಕರ್ತರು**

- ಅಂಗವೈಕಲ್ಯ ಹೊಂದಿರುವ (ಮಾನಸಿಕ ಅಸ್ವಸ್ಥತೆ ಸೇರಿದಂತೆ) ಫಲಾನುಭವಿಗಳು ಮತ್ತು ಒಬ್ಬ ಆರೈಕೆದಾರರು.
- ಖೈದಿಗಳು
- ಚಿತಾಗಾರ/ಸ್ಮಶಾನ/ರುದ್ರಭೂಮಿಯಲ್ಲಿ ಕೆಲಸ ಮಾಡುವ ಸಿಬ್ಬಂದಿ ಹಾಗೂ ಸ್ವಸಹಾಯಕರು.
- ಕೋವಿಡ್-19 ಕರ್ತವ್ಯಕ್ಕೆ ನಿಯೋಜಿಸಲಾದ ಶಿಕ್ಷಕರು.
- ಸರ್ಕಾರಿ ಸಾರಿಗೆ ಸಿಬ್ಬಂದಿ.
- ಆಟೋ ಮತ್ತು ಕ್ಯಾಬ್ ಚಾಲಕರು.
- ವಿದ್ಯುತ್ ಮತ್ತು ನೀರು ಸರಬರಾಜು ಮಾಡುವವರು.
- ಅಂಚೆ ಇಲಾಖೆಯ ಸಿಬ್ಬಂದಿಗಳು.
- ಬೀದಿ ಬದಿಯ ವ್ಯಾಪಾರ ಮಾಡುವವರು.
- ಭದ್ರತೆ ಮತ್ತು ಕಛೇರಿಗಳ ಹೌಸ್‌ಕೀಪಿಂಗ್ ಸಿಬ್ಬಂದಿಗಳು.
- ನ್ಯಾಯಾಂಗ ಅಧಿಕಾರಿಗಳು.
- ವಯೋವೃದ್ಧರ / ತೀವ್ರ ಅನಾರೋಗ್ಯದಿಂದ ಬಳಲುತ್ತಿರುವವರ ಆರೈಕೆದಾರರು.
- ಮಕ್ಕಳ ಸಂರಕ್ಷಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
- ಮಾಧ್ಯಮದವರು.
- ಆಸ್ಪತ್ರೆಗಳಿಗೆ ಸರಕು ಸರಬರಾಜು ಮಾಡುವ ವ್ಯಕ್ತಿಗಳು.
- ಆಯಿಲ್ ಇಂಡಸ್ಟ್ರಿ ಮತ್ತು ಗ್ಯಾಸ್ ಸರಬರಾಜು ಮಾಡುವವರು (ಪೆಟ್ರೋಲ್ ಬಂಕ್ ಕರ್ಮಚಾರಿ ಒಳಗೊಂಡಂತೆ).
- ಔಷಧಿ ತಯಾರಿಸುವ ಕಂಪನಿಯ ಸಿಬ್ಬಂದಿಗಳು.
- ಆಸ್ಪತ್ರೆಗಳಿಗೆ ಆಕ್ಸಿಜನ್, ಔಷಧಿಗಳು ಮತ್ತು ವೈದ್ಯಕೀಯ ಉಪಕರಣಗಳನ್ನು ಸರಬರಾಜು ಮಾಡುವ ಸಿಬ್ಬಂದಿಗಳು ಹಾಗೂ ಎಲ್.ಎಂ.ಓ ಸಿಬ್ಬಂದಿ (Liquid medical oxygen plant) ಗಳು.
- ಅಧಿಕೃತ ಗುರುತಿನ ಚೀಟಿ ಹೊಂದಿರದ ಫಲಾನುಭವಿಗಳು (ಉದಾಹರಣೆ: ವೃದ್ಧಾಶ್ರಮ ವಾಸಿಗಳು, ನಿರ್ಗತಿಕರು)
- ಭಾರತೀಯ ಆಹಾರ ನಿಗಮ ಸಿಬ್ಬಂದಿಗಳು ಹಾಗೂ ಕರ್ನಾಟಕ ರಾಜ್ಯ ಆಹಾರ ನಿಗಮ ಸಿಬ್ಬಂದಿಗಳು
- ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎ.ಪಿ.ಎಂ.ಸಿ.) ಕೆಲಸಗಾರರು
- ಕರ್ನಾಟಕ ರಾಜ್ಯ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿ.
- 18 ವರ್ಷ 44 ವರ್ಷ ವಯೋಮಾನದಲ್ಲಿನ ಕೋಮಾರ್ಬಿಡಿಟಿ ಹೊಂದಿರುವ ಫಲಾನುಭವಿಗಳು
- ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಸಿಬ್ಬಂದಿ.
- ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ತೋಟಗಾರಿಕೆ ಇಲಾಖೆಯ ಸಿಬ್ಬಂದಿ.
- ಭಾರತ್ ಎಲೆಕ್ಟ್ರಾನಿಕ್ ಲಿಮಿಟೆಡ್ (ಬಿ.ಇ.ಎಲ್) ಸಿಬ್ಬಂದಿ
- ಗ್ರಾಮ ಪಂಚಾಯತ್ ಮತ್ತು ನಗರಾಡಳಿತ ಸಂಸ್ಥೆಯ ಸ್ಥಳೀಯಾಡಳಿತ ಪ್ರತಿನಿಧಿಗಳು
- **ಆರೋಗ್ಯ ಕಾರ್ಯಕರ್ತರ ನಿಕಟ ಕುಟುಂಬಸ್ಥರು**